1956ರ ಕಂಪನಿ ಅಧಿನಿಯಮ 619(ಎ)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

III ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) : ಮಾನ್ಯ ಅಧ್ಯಕ್ಷರೇ,

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 300(5)ನೇ ಪ್ರಕರಣದ ಮೇರೆಗೆ:

1. ಯಾದಗಿರಿ ಜಿಲ್ಲಾ ಪಂಚಾಯತ್‌ನ 2010–11ನೇ ಸಾಲಿನ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತೇನೆ.

IV ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ಆರ್. ಅಶೋಕ್ ಗೃಹ ಮತ್ತು ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

ವಿಚಾರಣಾ ಆಯೋಗದ ಕಾಯ್ದೆ 1952ರ ಕಲಂ 3(4)ರ ಮೇರೆಗೆ:

1. ಕಾಡುಗಳ್ಳ ವೀರಪ್ಪನ್‌ನಿಂದ ಅಪಹರಿಸಲ್ಪಟ್ಟ ಶ್ರೀ ಹೆಚ್. ನಾಗಪ್ಪ, ಮಾಜಿ ಸಚಿವರು ಇವರ ಹತ್ಯೆಗೆ ಕಾರಣವಾದ ಸನ್ನಿವೇಶಗಳ ಬಗ್ಗೆ ನ್ಯಾಯಮೂರ್ತಿ ಶ್ರೀ ಆರ್.ಜಿ. ವೈದ್ಯನಾಥನ್‌ರವರ ವಿಚಾರಣಾ ಆಯೋಗದ ವರದಿಯನ್ನು ಮಂಡಿಸುತ್ತೇನೆ.

V ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಕುಮಾರಿ ಶೋಭಾ ಕರಂದ್ಲಾಜೆ ಇಂಧನ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಪರವಾಗಿ) ಮಾನ್ಯ ಅಧ್ಯಕ್ಷರೇ,